**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ, ಶ್ರೀರಂಗಪಟ್ಟಣ.**

ಸಾಕ್ಷಿಯನ್ನು ಮಧ್ಯಂತರ ಅರ್ಜಿಯ ಮೇಲೆ ಮಾಡಲಾದ ಆದೇಶದನ್ವಯ ಪುನಃ ಕರೆಯಿಸಿ
ಪ್ರಮಾಣ ವಚನ ಮಾಡಲಾದ ದಿ : 05.01.2024
ಪಾಟಿ ಸವಾಲು : 1 ಮತ್ತು 2 ನೇ ಪ್ರತಿವಾದಿ ಪರ ಶ್ರೀ ಹೆಚ್.ಆರ್ ವಕೀಲರಿಂದ

ವಾದಿ ನನಗೆ ಸುಮಾರು 30 ವರ್ಷಗಳಿಂದ ಪರಿಚಯ. ನನಗೆ ಓದಲು ಬಾರದ ಕಾರಣ ದಾವಾ ಸ್ವತ್ತಿನ ಸ.ನಂಬರ್, ವಿಸ್ತೀರ್ಣ ಹಾಗೂ ಚೆಕ್ಕು ಬಂದಿ ಗೊತ್ತಾಗುವುದಿಲ್ಲ ಎಂದರೆ ಸರಿ. ದಾವಾ ಸ್ವತ್ತಿಗೆ ಸಂಬಂಧಿಸಿದ ದಾಖಲಾತಿಗಳನ್ನು ನಾನು ನೋಡಿಲ್ಲ ಎಂದರೆ ಸರಿ. ದಾವಾ ಸ್ವತ್ತಿನ ಸಂಬಂಧ ಏನೆಲ್ಲಾ ವ್ಯವಹಾರಗಳು ನಡೆದಿದೆ ಮತ್ತು ಯಾವೆಲ್ಲಾ ದಾಖಲಾತಿಗಳು ಆಗಿವೆ ಎನ್ನುವ ಬಗ್ಗೆ ನನಗೆ ಗೊತ್ತಿಲ್ಲ ಎಂದರೆ ಸರಿ. ವಾದಿ ಕೋರಿಕೊಂಡಂತೆ ನಾನು ನ್ಯಾಯಾಲಯಕ್ಕೆ ಬಂದು ಆತನ ಪರವಾಗಿ ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸುಳ್ಳು. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ವಾದಿ ಹೇಳಿ ಬರೆಸಿದ್ದು ಅದಕ್ಕೆ ನಾನು ಸಹಿ ಮಾಡಿದ್ದೇನೆ ಎಂದರೆ ಸರಿ.

ವಾದಿ ನನ್ನ ಸ್ನೇಹಿತರಾದ ಕಾರಣ ಅವರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ದಾವಾ ಸ್ವತ್ತಿನ ಸಂಬಂಧ ನನಗೆ ಏನು ವಿಚಾರಗಳು ಗೊತ್ತಿಲ್ಲದಿದ್ದರೂ ಕೂಡ ಸುಳ್ಳು ಪ್ರಮಾಣ ಪತ್ರಿಕೆ ಸಲ್ಲಿಸಿ ಅದಕ್ಕೆ ಪೂರಕವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.